(ಕಂದಾಯ ಇಲಾಖೆ)

**ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ, ದಕ್ಷಿಣ ಕನ್ನಡ ಜಿಲ್ಲೆ.**

**DEPUTY COMMISSIONER & DISTRICT MAGISTRATE'S OFFICE, DAKSHINA KANNADA DISTRICT.**

Old Port Road, MANGALURU- 575001 ಹಳೇ ಬಂದರು ರಸ್ತೆ, ಮಂಗಳೂರು – 575001

Phone: 0824-2220584, 2220590 Fax: 0824-2441564, Email:dc.mnglr@gmail.com Website:www.dk.nic.in

ನಂ:ಎಂ.ಎ.ಜಿ(4)/ಆರ್.330/2022/194129/ಸಿ4 ದಿನಾಂಕ: 03-08-2022

## ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು

## ಇವರ ಆದೇಶ

ವಿಷಯ: ದಿನಾಂಕ: 03-08-2022 ರಿಂದ 05-08-2022 ರವರೆಗೆ ಸಂಜೆ 06-00 ಗಂಟೆಯಿಂದ ಬೆಳಗ್ಗೆ 06-00 ಗಂಟೆಯವರೆಗೆ ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ಹಿತದೃಷ್ಟಿಯಿಂದ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಅಂಗಡಿಗಳನ್ನು ಮುಚ್ಚುವ ಬಗ್ಗೆ.

ಉಲ್ಲೇಖ:
1. ಈ ಕಛೇರಿಯ ಆದೇಶ ಸಮ ಸಂಖ್ಯೆನಂ:ಎಂ.ಎ.ಜಿ(4)/ಆರ್.330/2022/194129/ಸಿ4 ; ದಿನಾಂಕ: 29-07-2022 / 01-08-2022.

ಪೊಲೀಸ್ ಆಯುಕ್ತರು ಮಂಗಳೂರು ನಗರ ಇವರ ಆದೇಶ ಸಂಖ್ಯೆ:ಎಂ ಎ ಜಿ -1/07/ಎಂ ಜಿ ಸಿ ಮಂ ನ/2022 ದಿನಾಂಕ:02-08-2022.

ಪೊಲೀಸ್ ಅಧೀಕ್ಷಕರು. ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರುಇವರ ವರದಿ ಸಂಖ್ಯೆ: 73(4)/ಎಸ್.ಬಿ./ದ.ಕ./ಇತರ/2022 ದಿನಾಂಕ: 02-08-2022.

——@——

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಂಭವಿಸಿದ ಅಹಿತಕರ ಘಟನೆಗಳಿಂದಾಗಿ ಪರಿಸ್ಥಿತಿಯು ಬೂದಿ ಮುಚ್ಚಿದ ಕೆಂಡದಂತಿದ್ದು, ಉದ್ವಿಗ್ನತೆಯಿಂದ ಕೂಡಿರುತ್ತದೆ ಹಾಗೂ ಕಾನೂನು ಸುವ್ಯವಸ್ಥೆಗೆ ಧಕ್ಕೆಯಾಗುವ ಸಾಧ್ಯತೆ ಹೆಚ್ಚಾಗಿರುತ್ತದೆ. ಅದನ್ನು ವಿರೋಧಿಸಿ ಮುಂದೆ ಅಹಿತಕರ ಘಟನೆ ನಡೆದು ಶಾಂತಿ ಸುವ್ಯವಸ್ಥೆಗೆ ತೊಂದರೆಯುಂಟಾಗುವ ಸಾಧ್ಯತೆ ಇರುವುದರಿಂದ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುಂಜಾಗ್ರತಾ ಕ್ರಮವನ್ನು ತೆಗೆದುಕೊಳ್ಳುವುದು ಅತೀ ಅವಶ್ಯಕವಾಗಿರುವ ಹಿನ್ನಲೆಯಲ್ಲಿ ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ದೃಷ್ಟಿಯಿಂದ ಸೂಕ್ತ ಮುಂಜಾಗ್ರತಾ ಕ್ರಮವಾಗಿ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ದಿನಾಂಕ: 29-07-2022 ರಿಂದ ದಿನಾಂಕ: 03-08-2022 ರವರೆಗೆ ಸಂಜೆ 06-00 ಗಂಟೆಯಿಂದ ಬೆಳಗ್ಗೆ 06-00 ಗಂಟೆಯವರೆಗೆ ಕೆಲವೊಂದು ನಿರ್ಬಂಧಗಳನ್ನು ಜ್ಯಾರಿಗೊಳಿಸಿ ಈಗಾಗಲೇ ಉಲ್ಲೇಖ (1) ರಂತೆ ಆದೇಶವನ್ನು ಹೊರಡಿಸಲಾಗಿರುತ್ತದೆ.

ಮುಂದುವರೆದು, ಉಲ್ಲೇಖ(2) ಹಾಗೂ (3) ರಂತೆ ಪೊಲೀಸ್ ಆಯುಕ್ತರು ಮಂಗಳೂರು ನಗರ ಹಾಗೂ ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರು ದಿನಾಂಕ: 03-08-2022 ರಿಂದ 05-08-2022 ರವರೆಗೆ ಸಂಜೆ 6.00 ಗಂಟೆಯಿಂದ ಬೆಳ್ಳಗೆ 6.00 ರವರೆಗೆ ಮಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ ಮತ್ತು ದಕ್ಷಿಣ ಕನ್ನಡ ಜಿಲ್ಲಾ ಪೊಲೀಸ್ ಘಟಕ ವ್ಯಾಪ್ತಿಯಲ್ಲಿ ಎಲ್ಲಾ ರೀತಿಯ ಅಂಗಡಿ ಮುಂಗ್ಗಟ್ಟುಗಳನ್ನು (ಆಸ್ಪತ್ರೆಗಳು, ಔಷಧಿ ಅಂಗಡಿಗಳು ಹಾಗೂ ಇತರೆ ತುರ್ತು ಸೇವೆಗಳನ್ನು ಹೊರತುಪಡಿಸಿ) ಮುಚ್ಚುವಂತೆ ಕೋರಿರುತ್ತಾರೆ.

ಈ ಹಿನ್ನಲೆಯಲ್ಲಿ ಜಿಲ್ಲೆಯ ಇತ್ತೀಚಿನ ವಿದ್ಯಮಾನಗಳನ್ನು ಗಣನೆಗೆ ತೆಗೆದುಕೊಂಡು, ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುಂಜಾಗ್ರತಾ ಕ್ರಮವನ್ನು ತೆಗೆದುಕೊಳ್ಳುವುದು ಅತೀ ಅವಶ್ಯಕವಾಗಿರುವ ಹಿನ್ನಲೆಯಲ್ಲಿ ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ದೃಷ್ಟಿಯಿಂದ ಸೂಕ್ತ ಮುಂಜಾಗ್ರತಾ ಕ್ರಮ ತೆಗೆದುಕೊಳ್ಳುವುದು ಅಗತ್ಯವಿರುವುದು ಮನಗಂಡು ಈ ಕೆಳಗಿನಂತೆ ಆದೇಶ.

## ಆದೇಶ

ಡಾ|| ರಾಜೇಂದ್ರ ಕೆ.ವಿ, ಭಾ.ಆ.ಸೇ. ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಆದ ನಾನು ಭಾರತೀಯ ದಂಡ ಪ್ರಕ್ರಿಯಾ ಸಂಹಿತೆ 1973 ರ ಕಲಂ 144 ರನ್ವಯ ಪ್ರದತ್ತವಾದ ಅಧಿಕಾರ ಚಲಾಯಿಸಿಕೊಂಡು ಈ ಮೇಲಿನ ಸಕಾರಣಗಳೊಂದಿಗೆ ವಿವರಿಸಿದ ಅಂಶಗಳನ್ನು ಆಧರಿಸಿ, ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ***ದಿನಾಂಕ:03-08-2022 ರಿಂದ ದಿನಾಂಕ: 05-08-2022 ರವರೆಗೆ ಸಂಜೆ 06-00 ಗಂಟೆಯಿಂದ ಬೆಳಗ್ಗೆ 06-00 ಗಂಟೆಯವರೆಗೆ*** ಈ ಕೆಳಕಂಡ ನಿರ್ಬಂಧಗಳನ್ನು ಜ್ಯಾರಿಗೊಳಿಸಿ ಆದೇಶಿಸಿದೆ.

1. ಆಸ್ಪತ್ರೆಗಳು, ಔಷಧಿ ಅಂಗಡಿಗಳು ಹಾಗೂ ಇತರೆ ತುರ್ತು ಸೇವೆಗಳನ್ನು ಹೊರತುಪಡಿಸಿ, ಉಳಿದ ಎಲ್ಲಾ ಅಂಗಡಿಗಳು, ವಾಣಿಜ್ಯ ಸಂಕೀರ್ಣಗಳು ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ದಿನಾಂಕ: 03-08-2022 ರಿಂದ ದಿನಾಂಕ: 05-08-2022 ರವರೆಗೆ ಸಂಜೆ 06-00 ಗಂಟೆಯಿಂದ ಬೆಳಗ್ಗೆ 06-00 ಗಂಟೆಯವರೆಗೆ ಮುಚ್ಚುವುದು.
2. ಮಾಲ್, ಚಿತ್ರಮಂದಿರಗಳು / ಸಿನೆಮಾ ಹಾಲ್, ಪಬ್ ಗಳನ್ನು ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ದಿನಾಂಕ: 03-08-2022 ರಿಂದ ದಿನಾಂಕ: 05-08-2022 ರವರೆಗೆ ಸಂಜೆ 6.00 ಗಂಟೆಯಿಂದ ಬೆಳಗ್ಗೆ 06-00 ಗಂಟೆಯವರೆಗೆ ಮುಚ್ಚುವುದು.
3. ಸಾರ್ವಜನಿಕರು ತುರ್ತು ಮತ್ತು ಅವಶ್ಯಕ ಕಾರ್ಯಗಳನ್ನು ಹೊರತುಪಡಿಸಿ ಇನ್ನಾವುದೇ ಕಾರಣಗಳಿಗೆ ವಸತಿ ಸಮುಚ್ಚಯದಿಂದ ಹೊರಬರುವುದನ್ನು ಕಡ್ಡಾಯವಾಗಿ ನಿರ್ಬಂಧಿಸಿದೆ.
4. ತುರ್ತು ಸಂದರ್ಭಗಳಲ್ಲಿ ಪ್ರಯಾಣಿಸುವ ಪ್ರಯಾಣಿಕರಿಗೆ ಅವಶ್ಯಕವೆಂದು ಕಂಡುಬಂದಲ್ಲಿ ಮಾತ್ರ ಬಸ್ಸು, ಆಟೋರಿಕ್ಷಾ ಮತ್ತು ಟ್ಯಾಕ್ಸಿ ವಾಹನಗಳ ಸಂಚಾರಕ್ಕೆ ಅವಕಾಶವಿರುತ್ತದೆ ಹಾಗೂ ಅವಶ್ಯಕ ವಸ್ತುಗಳ ಸಾಗಾಣಿಕೆಗೆ ಮಾತ್ರ ವಾಹನಗಳನ್ನು ಬಳಸಲು ಅವಕಾಶ ನೀಡಲಾಗಿದೆ.
5. ಅನಗತ್ಯ ವಾಹನಗಳ ಸಂಚಾರಕ್ಕೆ ಅವಕಾಶವಿರುವುದಿಲ್ಲ.
6. ಜಿಲ್ಲೆಯಲ್ಲಿ ಎಲ್ಲಾ ಸಭೆ ಸಮಾರಂಭಗಳನ್ನು, ಸಾಂಸ್ಕೃತಿಕ ಕಾರ್ಯಕ್ರಮಗಳು, ಧಾರ್ಮಿಕ ಸಂಸ್ಥೆಗಳಿಗೆ ಸಂಬಂಧಿಸಿದ ಉತ್ಸವ ಜಾತ್ರೆಗಳನ್ನು ಮುಂದೂಡುವುದು.
7. ಜಿಲ್ಲೆಯಲ್ಲಿ ಈಗಾಗಲೇ ನಿಗದಿಪಡಿಸಲಾಗಿರುವ ಖಾಸಗಿ ಸಮಾರಂಭಗಳನ್ನು ಮುಂದೂಡುವುದು.
8. ಹೋಟೇಲ್, ಪಾರ್ಸೆಲ್ ವ್ಯವಸ್ಥೆ, ತುರ್ತು ವ್ಯವಸ್ಥೆಗಳಿಗೆ ಮಾತ್ರ ಅವಕಾಶವಿರುತ್ತದೆ.

DISTRICT MAGISTRATE, D.K.
GOVT. OF KARNATAKA
ಕರ್ನಾಟಕ ಸರಕಾರ

9. ಜಿಲ್ಲೆಯ ಎಲ್ಲಾ ಸಂಧ್ಯಾ ಕಾಲೇಜುಗಳಿಗೆ 2 ದಿನಗಳ ರಜೆಯನ್ನು ಘೋಷಿಸಲಾಗಿದೆ.

10. ಜಿಲ್ಲೆಯಲ್ಲಿ ಎಲ್ಲಾ ಶಾಲಾ ಕಾಲೇಜುಗಳು ಎಂದಿನಂತೆ ಕಾರ್ಯನಿರ್ವಹಿಸುವುದು.

11. ಜಿಲ್ಲೆಯಾದ್ಯಂತ ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ಪೊಲೀಸ್ ಇಲಾಖೆಯವರು ಸೂಕ್ತ ಗಸ್ತು ವ್ಯವಸ್ಥೆಯನ್ನು ಮಾಡತಕ್ಕದ್ದು.

ಈ ಆದೇಶವನ್ನು ದಿನಾಂಕ: 03.08.2022 ರಂದು ನನ್ನ ಸ್ವಹಸ್ತಾಕ್ಷರ ಮತ್ತು ಮುದ್ರೆಯೊಂದಿಗೆ ಹೊರಡಿಸಲಾಗಿದೆ.

DISTRICT MAGISTRATE, D.K.
GOVT. OF KARNATAKA
ಕರ್ನಾಟಕ ಸರಕಾರ
ಜಿಲ್ಲಾ ದಂಡಾಧಿಕಾರಿ, ದ.ಕ.

ಡಾ|| ರಾಜೇಂದ್ರ ಕೆ.ವಿ. ಭಾ.ಆ.ಸೇ.,
ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

ರಿಗೆ - ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ

1. ಪೊಲೀಸ್ ಆಯುಕ್ತರು, ಮಂಗಳೂರು ನಗರ.
2. ಮುಖ್ಯ ಕಾರ್ಯನಿರ್ವಾಹಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಜಿಲ್ಲಾ ಪಂಚಾಯತ್, ಮಂಗಳೂರು.
3. ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
4. ಆಯುಕ್ತರು, ಮಂಗಳೂರು ಮಹಾನಗರ ಪಾಲಿಕೆ, ಮಂಗಳೂರು.
5. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
6. ಯೋಜನಾ ನಿರ್ದೇಶಕರು ನಗರಾಭಿವೃದ್ಧಿ ಕೋಶ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
7. ಸಹಾಯಕ ಆಯುಕ್ತರು - ಮಂಗಳೂರು / ಪುತ್ತೂರು ಉಪವಿಭಾಗ.
8. ತಹಶೀಲ್ದಾರರು - ಮಂಗಳೂರು, ಮೂಡಬಿದ್ರೆ, ಮುಲ್ಕಿ, ಉಳ್ಳಾಲ, ಬಂಟ್ವಾಳ, ಪುತ್ತೂರು, ಸುಳ್ಯ, ಬೆಳ್ತಂಗಡಿ, ಕಡಬ ತಾಲೂಕು.
9. ಜಿಲ್ಲೆಯ ಎಲ್ಲಾ ಸ್ಥಳೀಯ ಸಂಸ್ಥೆ ಅಧಿಕಾರಿಗಳು.
10. ಜಿಲ್ಲೆಯ ಎಲ್ಲಾ ತಾಲೂಕು ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿಗಳು.
11. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.